(ಊ) **ಶ್ರೀ ಎಂ.ಎಸ್. ಸೋಮಲಿಂಗಪ್ಪ (ಸದಸ್ಯರು, ವಿಶೇಷ ಜಂಟಿ ಸದನ ಸಮಿತಿ)**: ಮಾನ್ಯ ಅಧ್ಯಕ್ಷರೆ, "ಹೊರ ರಾಜ್ಯದ ಹಾಗೂ ರಾಜ್ಯದ ಗಡಿ ಭಾಗಗಳಲ್ಲಿ ನೆಲೆಸಿರುವ ಕನ್ನಡಿಗರ ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಅವಶ್ಯಕತೆಗಳ ಕುರಿತು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಜಂಟಿ ಸದನ ಸಮಿತಿ" ಯ ಮಧ್ಯಂತರ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು: ವರದಿಯನ್ನೊಪ್ಪಿಸಲಾಯಿತು.

(ಗೊಂದಲ)

6. ಚುನಾವಣೆ ಪ್ರಸ್ತಾವ:

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಸಭಾಧ್ಯಕ್ಷರೆ, ಕರ್ನಾಟಕ ವಿಶ್ವವಿದ್ಯಾನಿಲಯದ ಸಿಂಡಿಕೇಟ್‌ಗೆ ಒಬ್ಬ ಸದಸ್ಯರನ್ನು ಚುನಾಯಿಸಬೇಕೆಂದು ಚುನಾವಣಾ ವೇಳಾ ಪಟ್ಟಿಯನ್ನು ಈಗಾಗಲೇ ಹೊರಡಿಸಲಾಗಿದ್ದು, ಈ ಸಂಬಂಧದಲ್ಲಿ ಒಬ್ಬ ಸದಸ್ಯರನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯ ಸಿಂಡಿಕೇಟ್‌ಗೆ ನಾಮ ನಿರ್ದೇಶನ ಮಾಡಲು ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಮಾನ್ಯ ಸಚಿವರು ಮಂಡಿಸಿದ ಪ್ರಸ್ತಾವಕ್ಕೆ ಸದನದ ಸಹಮತ ಇದೆ ಎಂದು ಭಾವಿಸುತ್ತೇನೆ.

7. ಶಾಸನ ರಚನೆ:

(ಅ) ವಿಧೇಯಕಗಳ ಮಂಡನೆ

(1) ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2010

ಶ್ರೀ ಸುರೇಶ್ ಕುಮಾರ್ ಎಸ್. (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2010ರ ಕರ್ನಾಟಕ ವಿಧಾನಮಂಡಲದ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

2010ನೇ ಕರ್ನಾಟಕ ವಿಧಾನ ಮಂಡಲದವರ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ)

ವಿಧೇಯಕವನ್ನು ಮಂಡಿಸಲು ಅನುಮತಿ ನೀಡಬೇಕು.

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕೃತವಾಗಿದೆ.

ಶ್ರೀ ಸುರೇಶ್ ಕುಮಾರ್ ಎಸ್.(ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು: ವಿಧೇಯಕವನ್ನು ಮಂಡಿಸಲಾಗಿದೆ. ಅನುಬಂಧ– III

ಅಧ್ಯಕ್ಷರು: ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.

(ಆ) ಪರ್ಯಾಲೋಚನಾ ಪ್ರಸ್ತಾವ

(1) ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳು (ತಿದ್ದುಪಡಿ) ವಿಧೇಯಕ, 2010

ಶ್ರೀ ಸುರೇಶ್ ಕುಮಾರ್ ಎಸ್.(ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಮಾನ್ಯ ಅಧ್ಯಕ್ಷರೆ, 2010ನೇ ಸಾಲಿನ ಕರ್ನಾಟಕ ವಿಧಾನಮಂಡಲದ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ.